# ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ (ನಿ).

(ಕರ್ನಾಟಕ ಸರ್ಕಾರದ ಉದ್ಯಮ)

ನಂ.16/ಜಿ, ಕರ್ನಾಟಕ ರೀಜನಲ್ ಚಾಪ್ಟರ್ ಕಟ್ಟಡ, 01ನೇ ಮಹಡಿ, ತಿಮ್ಮಯ್ಯ ರಸ್ತೆ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು–560 052.

ಸಂಖ್ಯೆ: ಕ.ಮ.ಸ.ಅ.ನಿ/ಸಿಆರ್–53/2024–25 | **ಪ್ರಕಟಣೆ** | ದಿನಾಂಕ: 31.07.2024

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಹಾಗೂ ಈ ಯೋಜನೆಗಳಡಿ ಸಾಲ–ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅರ್ಜಿ ಸಲ್ಲಿಸಲು ಕೊನೆಯ ದಿ: 31.08.2024 ರಂದು ಸಾಯಂಕಾಲ 5:30 ರವರೆಗೆ (ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ)Visit to "KarnatakaHelp.in.

## ಅರ್ಜಿ ಸಲ್ಲಿಸಲು ಇರಬೇಕಾದ ಸಾಮಾನ್ಯ ಅರ್ಹತೆಗಳು

1) ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ (ನಿ.) ದ ವತಿಯಿಂದ ಎಲ್ಲಾ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಪ್ರವರ್ಗ–3–ಬಿ ಅಡಿಯಲ್ಲಿ 2(ಎ) ಯಿಂದ 2(ಎಫ್)ವರೆಗೆ ಬರುವ ಸಮುದಾಯಕ್ಕೆ ಸೇರಿರಬೇಕು, 2) ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ–3ಬಿ ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು), 3) ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು, 4) ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು, 5) ಸರ್ಕಾರಿ ಸೌಲಭ್ಯವನ್ನು (ಸಾಲ–ಸಹಾಯಧನ) ಪಡೆಯುವ ಸಂಬಂಧ ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. 6) ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಳಿಗೆ ಶೇ.1 ಮೀಸಲಾತಿ ಇರಿಸಿದೆ. 7) ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. (ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಮಾತ್ರ ಇಬ್ಬರಿಗೆ ಅವಕಾಶವಿರುತ್ತದೆ.)

## 1. ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ (ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ) ಯೋಜನೆಯ ಅರ್ಹತೆಗಳು:

ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ.98,000/– ಮತ್ತು ನಗರ ಪ್ರದೇಶದವರಿಗೆ ರೂ.1,20,000/–ಗಳ ಮಿತಿಯೊಳಗಿರಬೇಕು. 2) ಅರ್ಜಿದಾರರು 18 ವರ್ಷ ಮೇಲ್ಪಟ್ಟು 55 ವರ್ಷದ ಒಳಗಿನವರಾಗಿರಬೇಕು. 3) ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು 4) ಈ ಯೋಜನೆಯಲ್ಲಿ ಕನಿಷ್ಠ ರೂ.1,00,000/–ಗಳಿಂದ ಗರಿಷ್ಠ ರೂ.2,00,000/–ಗಳ ಸಾಲ ಒದಗಿಸಲಾಗುವುದು. ಈ ಮೊತ್ತದಲ್ಲಿ ಶೇ.15 ರಷ್ಟು ಕನಿಷ್ಠ ರೂ.20,000/– ಗಳಿಂದ ಗರಿಷ್ಠ ರೂ.30,000/–ಗಳವರೆಗೆ ಸಹಾಯಧನ ಹಾಗೂ ಶೇ. 85ರಷ್ಟು ಸಾಲವನ್ನು ವಾರ್ಷಿಕ ಶೇ. 4ರ ಬಡ್ಡಿ ದರದಲ್ಲಿ ಮಂಜೂರು ಮಾಡಲಾಗುವುದು, 2 ತಿಂಗಳ ವಿರಾಮ ಅವಧಿ ಇರುತ್ತದೆ ನಂತರ ಸಾಲವನ್ನು 34 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು.

## 2. ಜೀಜಾವು–ಜಲಭಾಗ್ಯಯೋಜನೆಯ (ಗಂಗಾ ಕಲ್ಯಾಣ ನೀರಾವರಿ ಯೋಜನೆ) ಅರ್ಹತೆಗಳು:

1) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ರೂ.98,000/–ಗಳ ಮಿತಿಯೊಳಗಿರಬೇಕು. 2) ಅರ್ಜಿದಾರರು 18 ವರ್ಷ ಮೇಲ್ಪಟ್ಟಿರಬೇಕು. 3) ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಕನಿಷ್ಠ 2 ಎಕರೆ ಹಾಗೂ ಗರಿಷ್ಠ 5 ಎಕರೆ ಜಮೀನು ಹೊಂದಿರಬೇಕು 4) ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು 5) ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿಲ್ಲದೆ ಇರುವ ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು. 6) ಈ ಯೋಜನೆಯಲ್ಲಿ ಘಟಕ ವೆಚ್ಚ ರೂ.3.75 ಲಕ್ಷಗಳು (ವಿದ್ಯುದೀಕರಣ ಸೇರಿ) ಹಾಗೂ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ.4.75 ಲಕ್ಷಗಳು. (ವಿದ್ಯುದೀಕರಣ ಸೇರಿ) ಹಾಗೂ ಅವಶ್ಯವಿದ್ದಲ್ಲಿ ರೂ.50,000/–ಗಳ ಸಾಲವನ್ನು ಶೇ.4 ಬಡ್ಡಿ ದರದಲ್ಲಿ ಮಂಜೂರು ಮಾಡಲಾಗುವುದು.

## 3. ಅರಿವು ಶೈಕ್ಷಣಿಕ ಸಾಲ ಯೋಜನೆಯ (Fresh Students) ಅರ್ಹತೆಗಳು:

ಈ ಯೋಜನೆಯಲ್ಲಿ ಸಿ.ಇ.ಟಿ. / ಎನ್.ಇ.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸ್ ಹಾಗೂ ಪಿ.ಹೆಚ್.ಡಿನಲ್ಲಿ ವ್ಯಾಸಂಗ ಮಾಡುವ ಮರಾಠ ಸಮುದಾಯಗಳ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.1,00,000/–ಗಳ ಸಾಲವನ್ನು ಶೇ.2ರ ಬಡ್ಡಿದರದಲ್ಲಿ ಶೈಕ್ಷಣಿಕ ಸಾಲ ನೀಡಲಾಗುವುದು. ವ್ಯಾಸಂಗ ಪೂರ್ಣಗೊಂಡ ನಂತರ 04 ತಿಂಗಳ ವಿರಾಮಾವಧಿ ಇರುತ್ತದೆ. ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು. 1) ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದ ಒಳಗಿನವರಾಗಿರಬೇಕು. 2) ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.3.50 ಲಕ್ಷಗಳ ಮಿತಿಯೊಳಗಿರಬೇಕು

- **ಅರಿವು ಶೈಕ್ಷಣಿಕ ಸಾಲ ಯೋಜನೆಯ (Renewals): ಅರ್ಹತೆಗಳು:** 2022–23 ಹಾಗೂ 2023–24 ನೇ ಸಾಲಿನಲ್ಲಿ ಸಾಲ ಪಡೆದ ವಿದ್ಯಾರ್ಥಿಗಳಿಗೆ 2024–25 ನೇ ಸಾಲಿಗೆ 2 ಹಾಗೂ 3 ನೇ ಕಂತಿನ ನವೀಕರಣ ಸಾಲ ಮಂಜೂರು ಮಾಡಲು 2 ಮತ್ತು 3 ನೇ ವರ್ಷದ ವ್ಯಾಸಂಗ ದೃಢೀಕರಣ ಮತ್ತು ಕಳೆದ ವರ್ಷದ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸುವುದು.

## 4. ರಾಜಶ್ರೀ ಶಾಹುಮಹಾರಾಜ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ (Fresh Students):

1) ವಿದೇಶ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ ಮರಾಠ ಸಮುದಾಯದ ವಿದ್ಯಾರ್ಥಿಗಳು ವಿದೇಶದಲ್ಲಿನ QS World Ranking 500 ರೊಳಗೆ ಬರುವ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟೋರಲ್ ಪಿಹೆಚ್‌ಡಿ, ಮಾಸ್ಟರ್ ಡಿಗ್ರಿ, ಕೋರ್ಸುಗಳಲ್ಲಿ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯುವ ಅಭ್ಯರ್ಥಿಗಳಿಗೆ ವಾರ್ಷಿಕ ಗರಿಷ್ಟ ರೂ.10.00 ಲಕ್ಷ ಅಥವಾ ವಿದ್ಯಾರ್ಥಿಗಳ ಕೋರ್ಸ್‌ನ ಪೂರ್ಣ ಅವಧಿಗೆ ಗರಿಷ್ಠ ರೂ.20.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ಮಂಜೂರು ಮಾಡಲು ಅರ್ಜಿಗಳನ್ನು ಅಹ್ವಾನಿಸಿದೆ. 2) ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.8.00ಲಕ್ಷಗಳ ಮಿತಿಯೊಳಗಿರಬೇಕು.

- **ರಾಜಶ್ರೀ ಶಾಹುಮಹಾರಾಜ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ (Renewals) ಅರ್ಹತೆಗಳು:** 2023–24ನೇ ಸಾಲಿನಲ್ಲಿ ಸಾಲ ಪಡೆದ ವಿದ್ಯಾರ್ಥಿಗಳಿಗೆ 2024–25 ನೇ ಸಾಲಿಗೆ 2ನೇ ಕಂತಿನ ನವೀಕರಣ ಸಾಲ ಮಂಜೂರು ಮಾಡಲು 2ನೇ ವರ್ಷದ ವ್ಯಾಸಂಗ ದೃಢೀಕರಣ ಮತ್ತು ಮೊದಲನೇ ವರ್ಷದ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸುವುದು.

## 5. ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆಯ ಅರ್ಹತೆಗಳು:

1) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶ ಮತ್ತು ನಗರ ಪ್ರದೇಶದವರಿಗೆ ರೂ.8.00 ಲಕ್ಷಗಳು ಮೀರತಕ್ಕದಲ್ಲ. 2) ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 55 ವರ್ಷಗಳನ್ನು ಮೀರಿರತಕ್ಕದ್ದಲ್ಲ. 3) ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.5.00 ಲಕ್ಷ ಸಾಲ, ರೂ.40,000/– ಸಹಾಯಧನ ಆಗಿರುತ್ತದೆ. 4) ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಮಂಜೂರು ಮಾಡಲಾಗುವುದು 5) 03 ವರ್ಷಗಳಲ್ಲಿ ಮಾಸಿಕ ಕಂತುಗಳಲ್ಲಿ ಮಂಜೂರಾತಿ ಆದೇಶದಲ್ಲಿ ನಿಗದಿ ಪಡಿಸಿರುವಂತೆ ಅಸಲು ಮತ್ತು ಬಡ್ಡಿಯನ್ನು ಮರುಪಾವತಿಸುವುದು.

## 6. ಸ್ವಯಂಉದ್ಯೋಗ ಸಾಲ ಯೋಜನೆಯ (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ) ಅರ್ಹತೆಗಳು:

ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ.98,000/– ಮತ್ತು ನಗರ ಪ್ರದೇಶದವರಿಗೆ ರೂ.1,20,000/–ಗಳ ಮಿತಿಯೊಳಗಿರಬೇಕು. 2) ಅರ್ಜಿದಾರರು 18 ವರ್ಷ ಮೇಲ್ಪಟ್ಟು 55 ವರ್ಷದ ಒಳಗಿನವರಾಗಿರಬೇಕು. 3) ಈ ಯೋಜನೆಯಡಿ ಉದ್ಯೋಗ ಪ್ರಾರಂಭಿಸಲು ಬ್ಯಾಂಕ್ / ಸಹಕಾರಿ ಸಂಘಗಳಿಂದ ಸಾಲ ಪಡೆಯಬೇಕು ಹಾಗೂ ನಿಗಮದಿಂದ ಶೇ.20ರಷ್ಟು ಅಥವಾ ಗರಿಷ್ಠ ರೂ.1.00 ಲಕ್ಷಗಳನ್ನು ನಿಗಮದಿಂದ ಸಹಾಯಧನ ಮಂಜೂರು ಮಾಡಲಾಗುವುದು. 4) ಬ್ಯಾಂಕ್‌ಗಳು ಮಂಜೂರು ಮಾಡುವ ಸಾಲಕ್ಕೆ ಬ್ಯಾಂಕ್‌ಗಳು ಚಾಲ್ತಿಯಲ್ಲಿರುವ ಬಡ್ಡಿಯನ್ನು ವಿಧಿಸಲಾಗುತ್ತದೆ.

## 7. ಸ್ವಾವಲಂಬಿ ಸಾರಥಿ ಯೋಜನೆಯ ಅರ್ಹತೆಗಳು:

1) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ.98,000/– ಮತ್ತು ನಗರ ಪ್ರದೇಶದವರಿಗೆ ರೂ.1,20,000/–ಗಳ ಮಿತಿಯೊಳಗಿರಬೇಕು. 2) ಅರ್ಜಿದಾರರು 21 ವರ್ಷ ಮೇಲ್ಪಟ್ಟು 45 ವರ್ಷದ ಒಳಗಿನವರಾಗಿರಬೇಕು. 3) ಈ ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಇಚ್ಚಿಸುವ ಅರ್ಜಿದಾರರು ಲಘುವಾಹನ ಚಾಲನಾ ಪರವಾನಿಗೆಯನ್ನು ಹೊಂದಿರಬೇಕು 4) ಅರ್ಜಿದಾರರು ನಿರುದ್ಯೋಗಿಯಾಗಿರಬೇಕು 5) ಈ ಯೋಜನೆಯಲ್ಲಿ ಸೌಲಭ್ಯ ಪಡೆಯುವ ಫಲಾನುಭವಿಯು ಸ್ವಯಂ ಟ್ಯಾಕ್ಸಿ ಚಾಲನೆ (Yellow Board) ಉದ್ದೇಶಕ್ಕೆ ವಾಹನವನ್ನು ನೋಂದಾಯಿಸತಕ್ಕದ್ದು. 6) ಸ್ವಾವಲಂಬಿ ಸಾರಥಿ ಯೋಜನೆಯಡಿ ನಾಲ್ಕು ಚಕ್ರಗಳ ವಾಹನವನ್ನು (ಟ್ಯಾಕ್ಸಿ, ಟಾಟಾ ಎಸಿ, ಗೂಡ್ಸ್ ವಾಹನ ಇತ್ಯಾದಿ ನಾಲ್ಕು ಚಕ್ರಗಳ ವಾಹನ) ಖರೀದಿಸಲು ಬ್ಯಾಂಕ್ / ಹಣಕಾಸು ಸಂಸ್ಥೆಗಳು ಮಂಜೂರು ಮಾಡಿದ ಸಾಲದ ಶೇ.50ರಷ್ಟು ಅಥವಾ ಗರಿಷ್ಟ ರೂ.3.00 ಲಕ್ಷಗಳವರೆಗೆ ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಸಹಾಯಧನವನ್ನು ನಿಗಮದಿಂದ ಮಂಜೂರು ಮಾಡುವುದು. ಉಳಿದ ಮೊತ್ತವನ್ನು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲದ ರೂಪದಲ್ಲಿ ಪಡೆಯುವುದು. ಈ ಸಾಲಕ್ಕೆ ಬ್ಯಾಂಕ್ / ಹಣಕಾಸು ಸಂಸ್ಥೆಗಳು ನಿಗದಿಪಡಿಸುವ ಬಡ್ಡಿಯನ್ನು ಪಾವತಿಸಬೇಕು.

## 8. ಸ್ವಾತಂತ್ರ್ಯ ಅಮೃತ್ ಮೊಹೋತ್ಸವ ಮುನ್ನಡೆ ಯೋಜನೆಯ ಅರ್ಹತೆಗಳು:

ಮರಾಠ ಸಮುದಾಯದ ಯುವಜನತೆಯನ್ನು ಕೌಶಲ್ಯ ಅಭಿವೃದ್ಧಿಪಡಿಸಿ ಉದ್ಯೋಗಮುಖಿಗಳನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTCs, KGTTIs ಇತ್ಯಾದಿಗಳಲ್ಲಿ ಅಲ್ಪಾವಧಿ ಕೋರ್ಸ್‌ಗಳ ಮೂಲಕ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಲು ಕೌಶಲ್ಯ ಕರ್ನಾಟಕ ತಂತ್ರಾಂಶದ (https://www.kaushalkar.com) ಮೂಲಕ ಅರ್ಜಿಗಳನ್ನು ಅಹ್ವಾನಿಸಿದೆ Visit to "KarnatakaHelp.in".

### ವಿಶೇಷ ಸೂಚನೆ

- ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಹಾಗೂ ಬ್ಯಾಂಕ್ ಖಾತೆಗೆ ಆಧಾರ ಸಂಖ್ಯೆಯನ್ನು ಸೀಡ್ ಮಾಡಿರಬೇಕು.
- ಕ್ರಮ ಸಂಖ್ಯೆ 01 ರಿಂದ 07 ರ ವರೆಗಿನ ಎಲ್ಲಾ ಯೋಜನೆಗಳಿಗೆ ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್‌ಲೈನ್ ಮೂಲಕವೇ ಸಲ್ಲಿಸಬೇಕಾಗಿರುತ್ತದೆ.
- ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರೂ ಸಹ ಆನ್‌ಲೈನ್‌ನಲ್ಲಿ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸುವುದು, ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸುವುದು.
- 2023–24 ನೇ ಸಾಲಿನ ನಿಗದಿತ ಯೋಜನೆಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಈ ವರ್ಷ ಅರ್ಜಿ ಹಾಕಬಾರದು. ಸರ್ಕಾರವು ಹಾಗೂ ನಿಗಮವು ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆ/ನಿಬಂಧನೆಗಳನ್ನು ಹೊಂದಿದವರಾಗಿರಬೇಕು.

**ಸಂಪರ್ಕ ವಿವರ:** ನಿಗಮದ ಸಹಾಯವಾಣಿ: 8867537799/ ದೂ.ಸಂ:080–29903994 (ಬೆಳಿಗ್ಗೆ: 10.00 ರಿಂದ ಸಂಜೆ: 5.30 ವರೆಗೆ ಸಂಪರ್ಕಿಸಬಹುದಾಗಿದೆ). ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರ ಕಛೇರಿ ವಿಳಾಸಗಳನ್ನು ಹಾಗೂ ಹೆಚ್ಚಿನ ವಿವರಗಳನ್ನು https://kmcdc.karnataka.gov.in ಇಲ್ಲಿ ತಿಳಿಯಬಹುದಾಗಿದೆ.

ಸಹಿ/–

(ಡಾ. ಪ್ರಕಾಶ್ ಆರ್ ಪಾಗೋಜಿ)

ವ್ಯವಸ್ಥಾಪಕ ನಿರ್ದೇಶಕರು

ವಾ.ಸಾ.ಸಂ.ಇ/ವಾಪ್ರ/1193/ಆಕಾರ್/2023–24